# ತುಮಕೂರು ವಿಶ್ವವಿದ್ಯಾನಿಲಯ

ಪರೀಕ್ಷಾ ಭವನ, ಬಿ.ಹೆಚ್.ರಸ್ತೆ,ತುಮಕೂರು-572 103 ☎:0816 - 2255650,2273511 ಫ್ಯಾಕ್ಸ್ : 0816-2270719


ಸಂಖ್ಯೆ:ತು.ವಿ.: ಪ.ವಿ.:2017-18/1918 ದಿನಾಂಕ: 11.12.2017

## ಅಧಿಸೂಚನೆ

**ವಿಷಯ:** 2018 ರ ಜನವರಿ ಮಾಹೆಯಲ್ಲಿ ನಡೆಯಲಿರುವ ಸ್ನಾತಕ ದೈಹಿಕ ಶಿಕ್ಷಣ(ಬಿ.ಪಿ.ಇಡಿ) ಪದವಿ ಪ್ರಥಮ ಮತ್ತು ತೃತೀಯ ಸೆಮಿಸ್ಟರ್(ನವೀನ & ಪೂರಕ) ಪರೀಕ್ಷೆಗಳ ಅಂತಿಮ ವೇಳಾಪಟ್ಟಿ, ಪರೀಕ್ಷಾ ಕೇಂದ್ರ ಘೋಷಣೆ ಹಾಗೂ ಪರೀಕ್ಷಾ ಮುಖ್ಯ ಅಧೀಕ್ಷಕರ ನೇಮಕಾತಿ ಕುರಿತು.

**ಉಲ್ಲೇಖ:** ಮಾನ್ಯ ಕುಲಪತಿಯವರ ಅನುಮೋದನೆಯ ದಿನಾಂಕ: 11.12.2017

*****

2018 ರ ಜನವರಿ ಮಾಹೆಯಲ್ಲಿ ನಡೆಯಲಿರುವ ಸ್ನಾತಕ ದೈಹಿಕ ಶಿಕ್ಷಣ(ಬಿ.ಪಿ.ಇಡಿ) ಪದವಿಯ ಪ್ರಥಮ ಮತ್ತು ತೃತೀಯ ಸೆಮಿಸ್ಟರ್(ನವೀನ & ಪೂರಕ) ಪರೀಕ್ಷೆಗಳು ಈ ಅಧಿಸೂಚನೆಯೊಂದಿಗೆ ಲಗತ್ತಿಸಿರುವ ಅಂತಿಮ ವೇಳಾಪಟ್ಟಿಯಂತೆ ಜರುಗಲಿವೆ.

ಈ ಪರೀಕ್ಷೆಗಳಿಗೆ ಸಂಬಂಧಿಸಿದಂತೆ **ಶ್ರೀ ಸಿದ್ಧಗಂಗಾ ದೈಹಿಕ ಶಿಕ್ಷಣ ಮಹಾವಿದ್ಯಾಲಯ, ಶ್ರೀ ಸಿದ್ಧಗಂಗಾ ಮಠ, ಕ್ಯಾತ್ಸಂದ್ರ, ತುಮಕೂರು ಈ ಕಾಲೇಜನ್ನು ಪರೀಕ್ಷಾ ಕೇಂದ್ರವನ್ನಾಗಿ ಘೋಷಿಸಲಾಗಿದೆ.**

ಈ ಪರೀಕ್ಷಾ ಕೇಂದ್ರಕ್ಕೆ ಸದರಿ ಕಾಲೇಜಿನ **ಪ್ರಾಂಶುಪಾಲರನ್ನು ಪರೀಕ್ಷಾ ಮುಖ್ಯ ಅಧೀಕ್ಷಕರನ್ನಾಗಿ ನೇಮಕಾತಿ ಮಾಡಲಾಗಿದ್ದು, ಪರೀಕ್ಷಾ ಪೂರ್ವ ಸಿದ್ಧತೆಗಳನ್ನು ಮಾಡಿಕೊಳ್ಳಲು ತಿಳಿಸಲಾಗಿದೆ.**

ಪರೀಕ್ಷಾ ಕಾರ್ಯಗಳಲ್ಲಿ ಏನಾದರೂ ಸಮಸ್ಯೆಗಳು ಉಂಟಾದಲ್ಲಿ ಕೂಡಲೇ **ಕುಲಸಚಿವರು(ಮೌಲ್ಯಮಾಪನ)- ಮೊ.ಸಂ.**-9448261860, **ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು** ಇವರನ್ನು ಸಂಪರ್ಕಿಸಿ ಮುಂದಿನ ಕ್ರಮ ಕೈಗೊಳ್ಳುವುದು.

**ಪರೀಕ್ಷಾ ಮುಖ್ಯ ಅಧೀಕ್ಷಕರುಗಳಿಗೆ (Examination Chief Superintendent) ಸೂಚನೆಗಳು:**

1. ಪರೀಕ್ಷಾ ಮುಖ್ಯ ಅಧೀಕ್ಷಕರಾಗಿ ಕಾರ್ಯ ನಿರ್ವಹಿಸುವವರು ಪರೀಕ್ಷಾ ದಿನದಂದು ಪರೀಕ್ಷಾ ಸಮಯಕ್ಕಿಂತ **ಅರ್ಧ ಗಂಟೆ** ಮುಂಚಿತವಾಗಿ ಕಾಲೇಜಿಗೆ ಬಂದು ಮೊಹರು ಮಾಡಿದ ಪ್ರಶ್ನೆ ಪತ್ರಿಕೆ ಲಕೋಟೆಯನ್ನು ತಮ್ಮ ಸಮ್ಮುಖದಲ್ಲೇ ತೆರೆದು ಪರೀಕ್ಷಾ ಕೊಠಡಿಗೆ ವಿತರಿಸುವ ವ್ಯವಸ್ಥೆ ಮಾಡಬೇಕು. ಮುಖ್ಯ ಅಧೀಕ್ಷಕರು ಇಲ್ಲದೆ ಇದ್ದಾಗ ಅನಧಿಕೃತವಾಗಿ ಬೇರೆ ಯಾರು ಕೂಡ ಪ್ರಶ್ನೆ ಪತ್ರಿಕೆಗಳ ಲಕೋಟೆಯನ್ನು ತೆರೆಯಬಾರದು.
2. ಯಾವುದೇ ಕಾರಣಕ್ಕೂ ಪರೀಕ್ಷಾ ಅಕ್ರಮಗಳು ನಡೆಯದಂತೆ ನೋಡಿಕೊಳ್ಳುವ ಜವಾಬ್ದಾರಿ ಮತ್ತು ಪರೀಕ್ಷಾ ಪಾವಿತ್ರತೆಯನ್ನು ಕಾಪಾಡುವುದು ತಮ್ಮ ಹೊಣೆಗಾರಿಕೆಯಾಗಿರುತ್ತದೆ.
3. Question Paper Codeಗೆ ಅನುಸಾರವಾಗಿ ಉತ್ತರ ಪತ್ರಿಕೆ ಪುಸ್ತಕಗಳನ್ನು Room Superintendent's Invigilation Dairyಯೊಂದಿಗೆ ಪ್ಯಾಕ್ ಮಾಡುವುದು ಹಾಗೂ ಆ ಪ್ಯಾಕ್‌ನ ಮೇಲೆ ದಿನಾಂಕ, ವಿಷಯ, ಕಾಲೇಜಿನ ಕೋಡ್, ಕಾಲೇಜಿನ ಹೆಸರು ಮತ್ತು ವಿಳಾಸ, Question Paper Codeನ್ನು ಹಾಗೂ ಬಂಡಲ್‌ನಲ್ಲಿರುವ ಒಟ್ಟು ಉತ್ತರ ಪತ್ರಿಕೆಗಳ ಸಂಖ್ಯೆಯನ್ನು ಕಡ್ಡಾಯವಾಗಿ ನಮೂದಿಸುವುದು.
4. ಪ್ರಶ್ನೆ ಪತ್ರಿಕೆಗಳು ಯಾವ ಕಾರಣಕ್ಕೂ ಪರೀಕ್ಷೆಯ ಸಮಯಕ್ಕಿಂತ ಮುಂಚೆ ಬಹಿರಂಗಗೊಳ್ಳದಂತೆ ಮುಖ್ಯ ಅಧೀಕ್ಷಕರು ಸುರಕ್ಷಿತವಾಗಿ ಸಂರಕ್ಷಿಸುವುದು, ಗೌಪ್ಯತೆ ಕಾಪಾಡುವುದಕ್ಕೆ ಮೊದಲ ಆದ್ಯತೆ ನೀಡಲು ತಿಳಿಸಿದೆ.

**ಪ್ರಶ್ನೆ ಪತ್ರಿಕೆಗಳನ್ನು ಸ್ವೀಕರಿಸುವ ಬಗ್ಗೆ ಸೂಚನೆಗಳು:**

ತಮ್ಮ ಪರೀಕ್ಷಾ ಕೇಂದ್ರಕ್ಕೆ ಸಂಬಂಧಿಸಿದ ಪ್ರಶ್ನೆ ಪತ್ರಿಕೆಗಳನ್ನು ಪರೀಕ್ಷೆ ನಡೆಯುವ ದಿನಗಳಂದು **ಬೆಳಗ್ಗೆ** 9:00 ಗಂಟೆಗೆ ಪರೀಕ್ಷಾ ಮುಖ್ಯ ಅಧೀಕ್ಷಕರು ಅಥವಾ ಅವರಿಂದ ಅಧಿಕೃತವಾಗಿ ನಿಯೋಜಿಸಲ್ಪಟ್ಟವರು, **ಕುಲಸಚಿವರು(ಮೌಲ್ಯಮಾಪನ), ಪರೀಕ್ಷಾ ಭವನ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು** ಇವರಿಂದ ಪಡೆದುಕೊಳ್ಳುವುದು.

(2 ನೇ ಪುಟಕ್ಕೆ)

ಉತ್ತರ ಪತ್ರಿಕೆಗಳನ್ನು ರವಾನಿಸುವ ಬಗ್ಗೆ ಸೂಚನೆಗಳು:

ತಮ್ಮ ಪರೀಕ್ಷಾ ಕೇಂದ್ರದಲ್ಲಿ ನಡೆದ ಪರೀಕ್ಷೆಗಳ ಉತ್ತರ ಪತ್ರಿಕೆಗಳ ಬಂಡಲ್‌ಗಳನ್ನು ಅದೇ ದಿನ ಕಾಲೇಜಿನವರೇ ವಿಶ್ವವಿದ್ಯಾನಿಲಯಕ್ಕೆ ಸಲ್ಲಿಸುವುದು. ಸುರಕ್ಷಿತವಾಗಿ ಉತ್ತರ ಪತ್ರಿಕೆಗಳ ಬಂಡಲ್‌ಗಳನ್ನು ವಿಶ್ವವಿದ್ಯಾನಿಲಯಕ್ಕೆ ತಲುಪಿಸುವ ಜವಾಬ್ದಾರಿ ಪರೀಕ್ಷಾ ಮುಖ್ಯ ಅಧೀಕ್ಷಕರದ್ದಾಗಿರುತ್ತದೆ.

ಮೇಲ್ಕಂಡ ಎಲ್ಲಾ ವಿಷಯಗಳು ಮತ್ತು ಸೂಚನೆಗಳನ್ನು ಕಡ್ಡಾಯವಾಗಿ ಪಾಲಿಸುವುದು ಮತ್ತು ಪರೀಕ್ಷೆಗಳು ಸುಗಮವಾಗಿ ನಡೆಯಲು ಕ್ರಮಕೈಗೊಳ್ಳುವುದು.

ಕುಲಸಚಿವರು (ಮೌಲ್ಯಮಾಪನ)

ಗೆ,

ಪ್ರಾಂಶುಪಾಲರು, ಶ್ರೀ ಸಿದ್ಧಗಂಗಾ ದೈಹಿಕ ಶಿಕ್ಷಣ ಮಹಾವಿದ್ಯಾಲಯ, ಸಿದ್ಧಗಂಗಾ ಮಠ, ತುಮಕೂರು.

ಪ್ರತಿಗಳು:

1. ಮಾನ್ಯ ಕುಲಪತಿಗಳ ಆಪ್ತ ಕಾರ್ಯದರ್ಶಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
2. ಮಾನ್ಯ ಕುಲಸಚಿವರ ಆಪ್ತ ಸಹಾಯಕರು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು
3. ಹಣಕಾಸು ಅಧಿಕಾರಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
4. ಸಿಸ್ಟಂ ಅನಾಲಿಸ್ಟ್, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು- ವಿಶ್ವವಿದ್ಯಾನಿಲಯದ ಅಂತರ್ಜಾಲ (ವೆಬ್‌ಸೈಟ್) ದಲ್ಲಿ ಇಂದೇ ಪ್ರಕಟಿಸುವುದು.
5. ಕಛೇರಿ ಪ್ರತಿ.

# TUMKUR UNIVERSITY

Pareeksha Bhavan, B.H. Road, Tumkur – 572103, Phone: 0816- 2255650, 2273511 Fax: 0816-2270719

No.TU: EXAM : Time Table :B.P.Ed:2017-18/1218 Date: 11.12.2017

The Final Time Table of I Semester B.P.Ed. Theory Examinations
January-2018

| DATE & DAY | TIME | SUBJECTS |
|---|---|---|
| 04.01.2018 Thursday | 9.30 am to 12.30 pm | History, Principals and Foundation of Physical Education |
| 06.01.2018 Saturday | 9.30 am to 12.30 pm | Anatomy & Physiology |
| 08.01.2018 Monday | 9.30 am to 12.30 pm | Health Education and Environmental Science |
| 10.01.2018 Wednesday | 9.30 am to 12.30 pm | Officiating & Coaching |

The Final Time Table of III Semester B.P.Ed. Theory Examinations
January-2018

| DATE & DAY | TIME | SUBJECTS |
|---|---|---|
| 04.01.2018 Thursday | 1.30 pm to 4.30 pm | Sports Training |
| 06.01.2018 Saturday | 1.30 pm to 4.30 pm | Computer Application In Physical Education |
| 08.01.2018 Monday | 1.30 pm to 4.30 pm | Sports Psychology and Sociology |
| 10.01.2018 Wednesday | 1.30 pm to 4.30 pm | Sports Medicine and Physiotherapy and Rehabilitation |

Registrar (Evaluation)